Akashvani: Bangalore
National Bulletin In Kannada
11.03.2026: 13.0hrs
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

11.03.2026: 13.10hrs
********

**ಮುಖ್ಯಾಂಶಗಳು**

1. ಕೇರಳದ ಕೊಚ್ಚಿಯಲ್ಲಿ ಇಂದು ೧೦ ಸಾವಿರದ ೮೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ನವದೆಹಲಿಯಲ್ಲಿಂದು ಜಲ ಮಹೋತ್ಸವ ೨೦೨೬ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ ; ಜಲಸಂರಕ್ಷಣೆಗೆ ಕರೆ
3. ಲೋಕಸಭೆಯಲ್ಲಿ ಅನಿಲ ಬೆಲೆ ಏರಿಕೆ ಸೇರಿ ಹಲವು ವಿಷಯಗಳ ಕುರಿತು ಪ್ರತಿಪಕ್ಷಗಳಿಂದ ಗದ್ದಲ
4. ವಿಶ್ವದಲ್ಲೇ ಅತ್ಯಂತ ಕೈಗೆಟಕುವ ದರದಲ್ಲಿ ಅಂತರ್ಜಾಲ ಸೇವೆಗಳು ಭಾರತದಲ್ಲಿ ಲಭ್ಯ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
5. ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿ; ಪುರುಷರ ಸಿಂಗಲ್ಸ್‌ನಲ್ಲಿಂದು ಭಾರತದ ಕಿಡಂಬಿ ಶ್ರೀಕಾಂತ್ ಕಣದಲ್ಲಿ

*******

ಪ್ರಧಾನಿ ನರೇಂದ್ರ ಮೋದಿ ಇಂದು ಕೇರಳ ಮತ್ತು ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ಇಂದು ಮಧ್ಯಾಹ್ನ ಕೇರಳದ ಕೊಚ್ಚಿಯಲ್ಲಿ ಅವರು ಸುಮಾರು ೧೦ ಸಾವಿರದ ೮೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಚಾಲನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಅವರು ಸಾರ್ವಜನಿಕ ಸಮಾರಂಭವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಪ್ರಧಾನಿ, ತಮಿಳುನಾಡಿನ ತಿರುಚಿರಾಪಳ್ಳಿಯಲ್ಲಿ ಸುಮಾರು ೫ ಸಾವಿರದ ೬೫೦ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಈ ಯೋಜನೆಗಳು ಪೆಟ್ರೋಲಿಯಂ

ಮತ್ತು ನೈಸರ್ಗಿಕ ಅನಿಲ ಮೂಲಸೌಕರ್ಯ, ಗ್ರಾಮೀಣ ಸಂಪರ್ಕ ಮತ್ತು ಹೆದ್ದಾರಿ ಅಭಿವೃದ್ಧಿಯಂತಹ ಪ್ರಮುಖ ವಲಯಗಳನ್ನು ಒಳಗೊಂಡಿವೆ. ಇದರ ಜೊತೆಗೆ ಪ್ರಧಾನಿ ನರೇಂದ್ರ ಮೋದಿ, ಐದು ಹೊಸ ರೈಲು ಸೇವೆಗಳಿಗೆ ಹಸಿರು ನಿಶಾನೆ ತೋರಿಸಲಿದ್ದಾರೆ.

*******

ಜಲ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಜಲ ಮಹೋತ್ಸವ ೨೦೨೬ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನೀರನ್ನು ಅಮೂಲ್ಯವಾದ ನಿಧಿಯಾಗಿ ಪರಿಗಣಿಸಿ, ಮುಂದಿನ ಪೀಳಿಗೆಗೆ ಸಂರಕ್ಷಿಸಬೇಕು ಎಂದು ಕರೆ ನೀಡಿದರು. ಸುಸ್ಥಿರ ಭವಿಷ್ಯವನ್ನು ಭದ್ರಪಡಿಸಿಕೊಳ್ಳಲು, ಜಲಸಂರಕ್ಷಣೆಯನ್ನು ಪ್ರತಿಯೊಬ್ಬರು ಜೀವನ ವಿಧಾನವನ್ನಾಗಿ ಮಾಡಿಕೊಳ್ಳಬೇಕು ಎಂದರು. ನಲ್ ಜಲ ಮಿತ್ರ ಕಾರ್ಯಕ್ರಮದಡಿಯಲ್ಲಿ, ಗ್ರಾಮೀಣ ಯುವಕರು ಮತ್ತು ಸ್ವ-ಸಹಾಯ ಗುಂಪುಗಳ ಮಹಿಳೆಯರಿಗೆ ನೀರು ಸರಬರಾಜು ವ್ಯವಸ್ಥೆಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯಲ್ಲಿ ಸಕ್ರಿಯ ಪಾಲುದಾರರನ್ನಾಗಿ ಮಾಡಲು ತರಬೇತಿ ನೀಡಲಾಗುತ್ತಿದೆ.  ಈ ಉಪಕ್ರಮವು, ನೀರಿನ ಸಂರಕ್ಷಣೆಗೆ ಕೊಡುಗೆ ನೀಡುವುದಲ್ಲದೆ, ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು ( ೧೮ ಸೆಕೆಂಡ್ಸ್)

ಕಾರ್ಯಕ್ರಮದಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್, ಜಲಶಕ್ತಿ ಖಾತೆ ರಾಜ್ಯ ಸಚಿವರಾದ ವಿ.ಸೋಮಣ್ಣ ಮತ್ತು ರಾಜ್ ಭೂಷಣ್ ಚೌಧರಿ ಕೂಡ ಉಪಸ್ಥಿತರಿದ್ದರು.

*******

ಲೋಕಸಭೆಯಲ್ಲಿಂದು ವಿರೋಧ ಪಕ್ಷಗಳ ಸದಸ್ಯರು ಏರುತ್ತಿರುವ ಎಲ್‌ಪಿಜಿ ಅನಿಲ ಬೆಲೆಗಳು ಮತ್ತಿತರ ವಿಷಯಗಳನ್ನು ಮುಂದಿಟ್ಟುಕೊಂಡು ಪ್ರತಿಭಟನೆ ನಡೆಸಿದರು. ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ನಡುವೆ ಎಲ್‌ಪಿಜಿ ಅನಿಲ ಕೊರತೆ ಕುರಿತಂತೆ ಚರ್ಚೆಗೆ ಅವಕಾಶ ನೀಡುವಂತೆ ಆಗ್ರಹಿಸಿದರು. ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸಭೆ ಸೇರಿದಾಗ ಮೊದಲಿಗೆ, ಪ್ರಶ್ನೋತರ ಕಲಾಪ ಕೈಗೆತ್ತಿಕೊಳ್ಳಲಾಯಿತು. ಪ್ರತಿಪಕ್ಷಗಳ ಗದ್ದಲದ ನಡುವೆ, ಕೇಂದ್ರ

ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಡಿಜಿಟಲ್ ಪ್ರವೇಶ ಮತ್ತು ಕವಚ್ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದ ಪ್ರಶ್ನೆಯನ್ನು ಉತ್ತರಿಸಿದರು. ಪೀಠಾಸೀನಾಧಿಕಾರಿ ದಿಲೀಪ್ ಸೈಕಿಯಾ ಸದನವನ್ನು ಸುಗಮವಾಗಿ ನಡೆಸಲು ಪ್ರಯತ್ನಿಸಿದರೂ, ಪ್ರತಿಪಕ್ಷಗಳ ಗದ್ದಲ ಮುಂದುವರಿದ ಬೆನ್ನಲ್ಲೆ ಕಲಾಪವನ್ನು ೧೨ ಗಂಟೆಗೆ ಮುಂದೂಡಲಾಯಿತು.

*******

ಲೋಕಸಭೆಯಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರ ಪದಚ್ಯುತಿ ಕುರಿತ ಪ್ರತಿಪಕ್ಷಗಳ ನಿರ್ಣಯದ ಬಗ್ಗೆ ಮಾತುಕತೆ ಮುಂದುವರಿಯಿತು. ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ಪ್ರತಿಪಕ್ಷಗಳ ಕೆಲವು ನಾಯಕರ ಹಿತಾಸಕ್ತಿಗಾಗಿ ಈ ನಿರ್ಣಯವನ್ನು ಮಂಡಿಸಲಾಗಿದೆ ಎಂದರು.ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ವಿದೇಶಗಳಲ್ಲಿ ತಮ್ಮ ಹೇಳಿಕೆಗಳ ಮೇಲೆ ನಿಯಂತ್ರಣ ಕಾಯ್ದುಕೊಳ್ಳಬೇಕು. ಅವರು ಭಾರತದ ಸಂವಿಧಾನ, ಸಂಸತ್ ಮತ್ತು ಚುನಾವಣಾ ಆಯೋಗದ ವಿರುದ್ಧದ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಸಂಸದರು ಆರೋಪಿಸಿದರು.

*******

ಭಾರತದಲ್ಲಿ ಅಂತರ್ಜಾಲ ಸೇವೆಗಳು ವಿಶ್ವದಲ್ಲೇ ಅತ್ಯಂತ ಕೈಗೆಟಕುವ ದರದಲ್ಲಿ ಲಭ್ಯವಿವೆ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗೆ ಉತ್ತರಿಸಿದ ಅವರು, ಜಾಗತಿಕವಾಗಿ ಪ್ರತಿ ಜಿಬಿ ಡೇಟಾಗೆ ಸರಾಸರಿ ೨.೫೯ ಡಾಲರ್ ದರವಿದ್ದರೆ, ಭಾರತದಲ್ಲಿ ಇದರ ದರ ಜಾಗತಿಕ ಸರಾಸರಿಗಿಂತ ಸುಮಾರು ೨೫ ಪಟ್ಟು ಕಡಿಮೆ ಇದೆ ಎಂದು ಹೇಳಿದರು. ಕಳೆದ ದಶಕದಲ್ಲಿ ಡಿಜಿಡಲ್ ಉಪಕ್ರಮದ ಮೂಲಕ ಅಂತರ್ಜಾಲ ವ್ಯಾಪ್ತಿಯನ್ನು ವಿಸ್ತರಿಸುವುದು, ದರಗಳನ್ನು ಕಡಿಮೆ ಮಾಡುವುದು ಮತ್ತು ಸದೃಢ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ನಿರ್ಮಿಸುವತ್ತ ಗಮನಹರಿಸಲಾಗಿದೆ ಎಂದರು. ರೈಲು ಅಪಘಾತ ತಡೆಗಟ್ಟು ಸ್ವದೇಶಿ ತಂತ್ರಜ್ಞಾನವಾದ 'ಕವಚ್' ಅಳವಡಿಸುವ ಕಾರ್ಯ ಅತ್ಯಂತ ವೇಗವಾಗಿ ನಡೆಯುತ್ತಿದೆ. ಈವರೆಗೆ ೮ ಸಾವಿರದ ೫೭೦ ಕಿಲೋಮೀಟರ್ ಉದ್ದಕ್ಕೂ ಆಪ್ಟಿಕಲ್ ಫೈಬರ್ ಕೇಬಲ್ ಅಳವಡಿಸಲಾಗಿದೆ.

ಅಲ್ಲದೆ, ಒಂದು ಸಾವಿರದ ೧೦೦ ಕ್ಕೂ ಹೆಚ್ಚು ದೂರಸಂಪರ್ಕ ಟವರ್‌ಗಳನ್ನು ನಿರ್ಮಿಸಲಾಗಿದ್ದು, ೭೮೭ ರೈಲ್ವೆ ನಿಲ್ದಾನಗಳಲ್ಲಿ ಡೇಟಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದ್ದಾರೆ.

*******

ಕಳೆದ ೧೨ ವರ್ಷಗಳಿಂದ ಕೋಮಾದಲ್ಲಿದ್ದ ೩೨ ವರ್ಷದ ಹರಿಶ್ ರಾಣಾ ಎಂಬುವವರಿಗೆ ಕೃತಕ ಜೀವ ರಕ್ಷಕ ವ್ಯವಸ್ಥೆ ಹಿಂಪಡೆಯುವ ಮೂಲಕ ದಯಾಮರಣಕ್ಕೆ ಇದೇ ಮೊದಲ ಬಾರಿಗೆ ಸುಪ್ರೀಂಕೋರ್ಟ್ ಅನುಮತಿ ನೀಡಿದೆ. ೨೦೧೩ರಲ್ಲಿ ಪಂಜಾಬ್ ವಿಶ್ವವಿದ್ಯಾಲಯದ ವಿದ್ಯಾರ್ಥಿಯಾಗಿದ್ದ ರಾಣಾ, ಕಟ್ಟಡದ ನಾಲ್ಕನೇ ಮಹಡಿಯಿಂದ ಬಿದ್ದು, ತಲೆಗೆ ತೀವ್ರ ಪೆಟ್ಟಾಗಿ ಅಂದಿನಿಂದ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರು. ನ್ಯಾಯಮೂರ್ತಿಗಳಾದ ಜೆ.ಬಿ.ಪರ್ಡಿವಾಲ ಮತ್ತು ಕೆ.ಬಿ.ವಿಶ್ವನಾಥನ್ ಅವರ ಪೀಠ, ದೆಹಲಿಯ ಏಮ್ಸ್ ಆಸ್ಪತ್ರೆಗೆ ಈ ಕುರಿತು ನಿರ್ದೇಶನ ನೀಡಿದ್ದು, ಗೌರವಯುತವಾಗಿ ಚಿಕಿತ್ಸೆಯನ್ನು ಹಿಂಪಡೆಯಲು ಸೂಚಿಸಿದೆ.

*******

ಕೇಂದ್ರ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್, ಚಿಲಿ ದೇಶದ ಅಧ್ಯಕ್ಷರಾಗಿ ಆಯ್ಕೆಯಾದ ಜೋಸ್ ಆಂಟನಿಯೋ ಕಾಸ್ಟ್ ಅವರನ್ನು ಚಿಲಿಯ ಅಧ್ಯಕ್ಷೀಯ ಪದಗ್ರಹಣ ಸಮಾರಂಭದ ಮುನ್ನ ಭೇಟಿ ಮಾಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಕಟಿಸಿದ ಸಂದೇಶದಲ್ಲಿ, ಚಿಲಿಯ ಹೊಸ ಸರ್ಕಾರದೊಂದಿಗೆ ವ್ಯಾಪಾರ, ಹೂಡಿಕೆ, ಪ್ರಮುಖ ಖನಿಜ ಸಂಪನ್ಮೂಲಗಳು, ಸ್ವಚ್ಛ ಇಂಧನ ಹಾಗೂ ನವೋದ್ಯಮ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಭಾರತ ಬದ್ಧವಾಗಿದೆ ಎಂದು ಅವರು ಪುನರುಚ್ಚರಿಸಿದ್ದಾರೆ. ಈ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪತಿ ಮುರ್ಮು ಹಾಗೂ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೊಸದಾಗಿ ಆಯ್ಕೆಯಾದ ಅಧ್ಯಕ್ಷ ಕಾಸ್ಟ್ ಅವರಿಗೆ  ಶುಭಾಶಯಗಳನ್ನು ತಿಳಿಸಿದರು. ಭಾರತ-ಚಿಲಿ ಸಂಬಂಧಗಳಲ್ಲಿ ಹೊಸ ಅಧ್ಯಾಯ ಆರಂಭವಾಗುವ ನಿರೀಕ್ಷೆಯಿದೆ ಎಂದು ಪ್ರಧಾನಿ ಹೇಳಿದ್ದಾರೆ.

*******

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೆರಿಕದಲ್ಲಿ ಕಳೆದ ಐವತ್ತು ವರ್ಷಗಳಲ್ಲಿ ನಿರ್ಮಾಣವಾಗುವ ಮೊದಲ ತೈಲ ಶುದ್ಧೀಕರಣ ಘಟಕವನ್ನು ಘೋಷಿಸಿದ್ದಾರೆ. ಈ ಘಟಕಕ್ಕೆ

ರಿಲಾಯನ್ಸ್ ಇಂಡಸ್ಟ್ರೀಸ್ ಹೂಡಿಕೆ ಮಾಡುವುದಾಗಿ ಅವರು ತಿಳಿಸಿದ್ದಾರೆ. ಅಮೆರಿಕದ ಪೋರ್ಟ್ ಆಫ್ ಬ್ರೌನ್ಸ್‌ವಿಲ್ಲೆನಲ್ಲಿ ಸ್ಥಾಪಿಸಲಾಗುವ ಈ ಹೊಸ ತೈಲ ಶುದ್ಧೀಕರಣ ಘಟಕವು ಅಮೆರಿಕದ ಮಾರುಕಟ್ಟೆಗಳಿಗೆ ಇಂಧನ ಪೂರೈಕೆ ಮಾಡುವುದರ ಜೊತೆಗೆ ರಾಷ್ಟ್ರೀಯ ಭದ್ರತೆಯನ್ನು ಬಲಪಡಿಸುವುದು, ದೇಶೀಯ ಇಂಧನ ಉತ್ಪಾದನೆಯನ್ನು ಹೆಚ್ಚಿಸುವುದು ಮತ್ತು ಸಾವಿರಾರು ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದಾಗಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದ ಸಂದೇಶದಲ್ಲಿ, ಸುಮಾರು ೩೦೦ ಬಿಲಿಯನ್ ಡಾಲರ್ ಮೌಲ್ಯದ ಈ ಒಪ್ಪಂದವನ್ನು ಅಮೆರಿಕದ ಇತಿಹಾಸದಲ್ಲಿಯೇ ಇದು ಅತಿ ದೊಡ್ಡ ಒಪ್ಪಂದ ಎಂದು ಬಣ್ಣಿಸಿರುವ ಅವರು, ಅಮೆರಿಕದ ಕಾರ್ಮಿಕರು, ಇಂಧನ ಕ್ಷೇತ್ರ ಮತ್ತು ದಕ್ಷಿಣ ಟೆಕ್ಸಾಸ್ ಪ್ರದೇಶದ ಜನರಿಗೆ ದೊಡ್ಡ ಜಯವಾಗಿದೆ ಎಂದು ಹೇಳಿದ್ದಾರೆ. ಆದರೆ, ಈ ಒಪ್ಪಂದದ ಕುರಿತು ರಿಲಾಯನ್ಸ್ ಇಂಡಸ್ಟ್ರೀಸ್ ಸಂಸ್ಥೆಯಿಂದ ಇನ್ನೂ ಯಾವುದೇ ಅಧಿಕೃತ ಪ್ರಕಟಣೆ ಹೊರಬಂದಿಲ್ಲ.

*******

ಸ್ವಿಟ್ಜರ್‌ಲ್ಯಾಂಡ್‌ನ ಬಾಸೆಲ್‌ನಲ್ಲಿ ನಡೆಯುತ್ತಿರುವ ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿಂದು ಭಾರತದ ಶೆಟ್ಲರ್‌ಗಳು ತಮ್ಮ ಅಭಿಯಾನ ಆರಂಭಿಸಲಿದ್ದಾರೆ. ಸಿಂಗಲ್ಸ್ ವಿಭಾಗದಲ್ಲಿ ಭಾರತದ ಕಿಡಂಬಿ ಶ್ರೀಕಾಂತ್ ಇಂದು ಹಾಂಕಾಂಗ್‌ನ ಜೇಸನ್ ಗುನವಾನ್ ವಿರುದ್ಧ ಕಣಕ್ಕಿಳಿಯಲಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ ವಿಶ್ವದ ನಾಲ್ಕನೇ ಶ್ರೇಯಾಂಕಿತ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಸಿಂಗಾಪುರ ಜೋಡಿ ವಿರುದ್ಧ ಸೆಣಸಾಟ ನಡೆಸಲಿದ್ದಾರೆ. ಭಾರತದ ಹರಿಹರನ್ ಅಂಸಕರುಣನ್ ಮತ್ತು ಎಂ.ಆರ್.ಅರ್ಜುನ್ ಚೀನಾ ಜೋಡಿ ವಿರುದ್ಧ ಸೆಣಸಲಿದೆ. ಮಹಿಳಾ ಸಿಂಗಲ್ಸ್‌ನಲ್ಲಿ ಭಾರತದ ಉನ್ನತಿ ಹೂಡಾ ಹಾಗೂ ಮಹಿಳಾ ಡಬಲ್ಸ್‌ನಲ್ಲಿ ಭಾರತದ ತ್ರಿಶಾ ಜಾಲಿ ಮತ್ತು ಗಾಯಿತ್ರಿ ಗೋಪಿ ಚಂದ್ ಜೋಡಿ ಕಣಕ್ಕಿಳಿಯುತ್ತಿದೆ.

*******

ಭಾರತದ ವಿದೇಶಾಂಗ ಇಲಾಖೆ ಪಶ್ಚಿಮ ವಿಭಾಗದ ಕಾರ್ಯದರ್ಶಿ ಸಿಬಿ ಜಾರ್ಜ್, ಜಿನೀವಾದಲ್ಲಿ ಅಂತಾರಾಷ್ಟ್ರೀಯ ದೂರಸಂಪರ್ಕ ಒಕ್ಕೂಟ-ಐಟಿಯುನ ಪ್ರಧಾನ ಕಾರ್ಯದರ್ಶಿ ಡೊರಿನ್ ಬೊಗ್ದಾನ್ ಮಾರ್ಟಿನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ

ಸುರಕ್ಷಿತ ಸದೃಢ ಮತ್ತು ಒಳಗೊಳ್ಳುವ ಡಿಜಿಟಲ್ ಮೂಲಸೌಕರ್ಯದ ಕುರಿತು ಜಾಗತಿಕ ಸಹಕಾರ ಬಲಪಡಿಸುವ ಬಗ್ಗೆ ಚರ್ಚೆ ನಡೆಸಿದರು. ಇದೇ ವೇಳೆ, ಜಾಗತಿಕವಾಗಿ ವಿವಿಧ ಸಮುದಾಯಗಳನ್ನು ಪರಸ್ಪರ ಸಂಪರ್ಕಿಸುವ ನಾವಿನ್ಯತೆಗಳನ್ನು ಉತ್ತೇಜಿಸುವ ಕುರಿತು ಸಮಾಲೋಚನೆ ನಡೆಸಲಾಯಿತು.

***END****